**All India Radio: Bangalore**
**National Bulletin In Kannada**
**29.07.2025 7.35am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

೧. ಸಂಸತ್ತಿನ ಮುಂಗಾರು ಅಧಿವೇಶ; ಉಭಯ ಸದನಗಳಲ್ಲಿ ಇಂದು ಆಪರೇಷನ್ ಸಿಂದೂರ ಕಾರ್ಯಚರಣೆ ಕುರಿತು ಚರ್ಚೆ ಮುಂದುವರಿಕೆ

೨. ಆಪರೇಷನ್ ಸಿಂದೂರ ಕಾರ್ಯಚರಣೆ ಬಗ್ಗೆ ರಾಜನಾಥ್, ಜೈಶಂಕರ್ ಲೋಕಸಭೆಯಲ್ಲಿ ಭಾಷಣ; ಪ್ರಧಾನಿ ನರೇಂದ್ರ ಮೋದಿ ಪ್ರಶಂಸೆ

೩. ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ ಜಾರಿಯಾಗಿ ಇಂದಿಗೆ ಐದು ವರ್ಷ; ದೆಹಲಿಯ ಭಾರತ್ ಮಂಟಪಂನಲ್ಲಿ ಇಂದು ಅಖಿಲ ಭಾರತೀಯ ಶಿಕ್ಷಾ ಸಮಾಗಮ್ ಕಾರ್ಯಕ್ರಮಕ್ಕೆ ಸಚಿವ ಧರ್ಮೇಂದ್ರ ಪ್ರಧಾನ್ ಚಾಲನೆ

೪. ಫಿಡೆ ಮಹಿಳಾ ವಿಶ್ವಕಪ್ ವಿಜೇತೆ ದಿವ್ಯಾ ದೇಶಮುಖ್ ಗೆ ಪ್ರಧಾನಿ ಸೇರಿ ಹಲವು ಗಣ್ಯರಿಂದ ಅಭಿನಂದನೆ

೫. ಮಕಾವ್ ಓಪನ್ ಸೂಪರ್ ಬ್ಯಾಡ್ಮಿಂಟನ್ ಟೂರ್ನಿ ಇಂದಿನಿಂದ ಆರಂಭ; ಶುಭಾರಂಭದ ನಿರೀಕ್ಷೆಯಲ್ಲಿ ಭಾರತೀಯರು

**><><><><><><><><**

ಆಪರೇಷನ್ ಸಿಂದೂರ್ ಕುರಿತ ವಿಶೇಷ ಚರ್ಚೆ ಸಂಸತ್ತಿನ ಉಭಯ ಸದನಗಳಲ್ಲಿ ಇಂದು ಮುಂದುವರೆಯಲಿದೆ. ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಭಾರತದ ಬಲವಾದ, ಯಶಸ್ವಿ ಮತ್ತು ನಿರ್ಣಾಯಕ ಕಾರ್ಯಾಚರಣೆಯ ಚರ್ಚೆಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಿನ್ನೆ ಸದನದಲ್ಲಿ ಪ್ರಾರಂಭಿಸಿದರು. ಕಾರ್ಯಾಚರಣೆ ಕುರಿತು ರಾಜ್ಯಸಭೆಯಲ್ಲಿ ಇಂದು ಚರ್ಚೆ ಆರಂಭವಾಗಲಿದೆ.

ಚರ್ಚೆಯಲ್ಲಿ ಭಾಗವಹಿಸಿದ ವಿದೇಶಾಂಗ ಸಚಿವ ಎಸ್.ಜೈಶಂಕರ್, ಪಹಲ್ಗಾಮ್ ದಾಳಿಗೆ ಭಾರತದ ಸೇನಾ ಪ್ರತ್ಯುತ್ತರವು ಗಡಿಯಾಚೆಗಿನ ಭಯೋತ್ಪಾದನೆಯನ್ನು ಎದುರಿಸುವುದನ್ನು ಹೇಗೆ ಎಂಬುದನ್ನು ತೋರಿಸಿಕೊಟ್ಟಿದೆ ಎಂದು ಹೇಳಿದರು. ಜತೆಗೆ ಭಾರತದ ನಿಲುವನ್ನು ವ್ಯಾಖ್ಯಾನಿಸುವ ಐದು ಅಂಶಗಳ ವಿಧಾನವನ್ನು ಅವರು ವಿವರಿಸಿದರು, ಅಂದರೆ, ಭಯೋತ್ಪಾದಕರನ್ನು ಪ್ರಾಕ್ಸಿಗಳಾಗಿ ಪರಿಗಣಿಸಲಾಗುವುದಿಲ್ಲ, ಗಡಿಯಾಚೆಗಿನ ಭಯೋತ್ಪಾದನೆಯು ಸೂಕ್ತ ಪ್ರತಿಕ್ರಿಯೆಯನ್ನು ಎದುರಿಸಬೇಕಾಗುತ್ತದೆ. ಭಯೋತ್ಪಾದನೆ ಮತ್ತು ಮಾತುಕತೆಗಳು ಒಟ್ಟಿಗೆ ಸಾಗಲು ಸಾಧ್ಯವಿಲ್ಲ ಭಾರತವು ಪರಮಾಣು ಬ್ಲ್ಯಾಕ್ ಮೇಲ್ ಗೆ ಮಣಿಯುವುದಿಲ್ಲ ಮತ್ತು ಭಯೋತ್ಪಾದನೆ ಉತ್ತಮ ನೆರೆಹೊರೆಯ ಸಂಬಂಧಗಳೊಂದಿಗೆ ಸಹಬಾಳ್ವೆ ನಡೆಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

><><><><><><><><

ಲೋಕಸಭೆಯಲ್ಲಿ ನಿನ್ನೆ ಆಪರೇಷನ್ ಸಿಂದೂರ್ ಕುರಿತ ಚರ್ಚೆಯ ಸಂದರ್ಭದಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮಾಡಿದ ಭಾಷಣಗಳನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಸಾಮಾಜಿಕ ಮಾಧ್ಯಮದ ಸರಣಿ ಪೋಸ್ಟ್ ಗಳಲ್ಲಿ, ಪ್ರಧಾನಿ ಅವರು ಭಾಷಣಗಳನ್ನು ಅತ್ಯುತ್ತಮ ಮತ್ತು ಒಳನೋಟವನ್ನು ಒಳಗೊಂಡಿದೆ ಎಂದು ಬಣ್ಣಿಸಿದ್ದಾರೆ. ಜೈಶಂಕರ್ ಅವರು ತಮ್ಮ ಭಾಷಣದಲ್ಲಿ, ಆಪರೇಷನ್ ಸಿಂದೂರ್ ಮೂಲಕ ಭಯೋತ್ಪಾದನೆಯ ಪಿಡುಗಿನ ವಿರುದ್ಧ ಹೋರಾಡುವ ಭಾರತದ ದೃಷ್ಟಿಕೋನವನ್ನು ಜಗತ್ತು ಹೇಗೆ ಸ್ಪಷ್ಟವಾಗಿ ಕೇಳಿದೆ ಎಂಬುದನ್ನು ಬಿಂಬಿಸಿದ್ದಾರೆ ಎಂದು ಪ್ರಧಾನಿ ಹೇಳಿದ್ದಾರೆ. ಹಾಗೆಯೇ ರಕ್ಷಣಾ ಸಚಿವರು ಮಾಡಿದ ಭಾಷಣದ ಬಗ್ಗೆ ಮಾತನಾಡಿದ ಅವರು, ರಾಜನಾಥ್ ಸಿಂಗ್ ಅವರು ಭಾರತದ ಭದ್ರತಾ ವ್ಯವಸ್ಥೆಯ ಯಶಸ್ಸು ಮತ್ತು ಆಪರೇಷನ್ ಸಿಂಧೂರ್‌ನಲ್ಲಿ ನಮ್ಮ ಸಶಸ್ತ್ರ ಪಡೆಗಳ ಧೈರ್ಯದ ಬಗ್ಗೆ ಒಳನೋಟದ ದೃಷ್ಟಿಕೋನವನ್ನು ನೀಡಿದ್ದಾರೆ ಎಂದು ಉಲ್ಲೇಖಿಸಿದ್ದಾರೆ.

><><><><><><><><

ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ - ಎನ್‌ಇಪಿ ಜಾರಿಯಾಗಿ ಇಂದಿಗೆ ೫ ವರ್ಷ ಪೂರ್ಣಗೊಳ್ಳುತ್ತಿದೆ. ಎನ್‌ಇಪಿ ಜಾರಿಯು ದೇಶದ ಶಾಲೆಗಳನ್ನು ಪಠ್ಯಪುಸ್ತಕಗಳು, ಅಂಕಗಳು ಅಥವಾ ಕಂಠಪಾಠಕ್ಕೆ ಸೀಮಿತವಾಗಿಲ್ಲದ ಸ್ಥಳಗಳಾಗಿ ಪರಿವರ್ತಿಸುವ ಮಹತ್ವಾಕಾಂಕ್ಷೆಯ ಮಾರ್ಗಸೂಚಿಯನ್ನು ರೂಪಿಸಿದೆ. ಕಳೆದ ಐದು ವರ್ಷಗಳಲ್ಲಿ, ಈ ನೀತಿಯು ದೇಶದಲ್ಲಿ ಹೆಚ್ಚು ಅಂತರ್ಗತ, ಕಲಿಯುವ ಕೇಂದ್ರಿತ ಮತ್ತು ಭವಿಷ್ಯಕ್ಕೆ ಸಿದ್ಧವಾದ ಶಿಕ್ಷಣ ವ್ಯವಸ್ಥೆಗೆ ಅಡಿಪಾಯ ಹಾಕಿದೆ.

><><><><><><><><

ರಾಷ್ಟ್ರೀಯ ಶಿಕ್ಷಣ ನೀತಿ -ಎನ್.ಇ.ಪಿ ೨೦೨೦ ರ ೫ನೇ ವಾರ್ಷಿಕೋತ್ಸವದ ಅಂಗವಾಗಿ ಶಿಕ್ಷಣ ಸಚಿವಾಲಯವು ಅಖಿಲ ಭಾರತೀಯ ಶಿಕ್ಷಾ ಸಮಾಗಮ್- ೨೦೨೫ ಅನ್ನು ದೆಹಲಿಯ ಭಾರತ್ ಮಂಟಪಂ ಆವರಣದಲ್ಲಿ ಇಂದು ಆಯೋಜಿಸಿದೆ. ದಿನವಿಡೀ ನಡೆಯುವ ಚರ್ಚೆಗಳನ್ನು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಉದ್ಘಾಟಿಸಲಿದ್ದಾರೆ. ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ ರ ಐದನೇ ವಾರ್ಷಿಕೋತ್ಸವವನ್ನು ಗುರುತಿಸುವ ಅಖಿಲ ಭಾರತೀಯ ಶಿಕ್ಷಾ ಸಮಾಗಮ್ - ಎ.ಬಿ.ಎಸ್.ಎಸ್, ಶಿಕ್ಷಣ ತಜ್ಞರು, ನೀತಿ ನಿರೂಪಕರು, ಉದ್ಯಮದ ಮುಖಂಡರು ಮತ್ತು ಸರ್ಕಾರಿ ಪ್ರತಿನಿಧಿಗಳಿಗೆ ಎನ್.ಇ.ಪಿ ೨೦೨೦ ರ ಅಡಿಯಲ್ಲಿ ಸಾಧಿಸಿದ ಗಮನಾರ್ಹ ಪ್ರಗತಿಯನ್ನು ಪರಿಶೀಲಿಸಲು ಮತ್ತು ಮುಂದಿನ ಹಾದಿಯನ್ನು ರೂಪಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಎ.ಬಿ.ಎಸ್.ಎಸ್ ೨೦೨೫ರ ಸಮಯದಲ್ಲಿನ ಚರ್ಚೆಗಳು ಶಿಕ್ಷಣವನ್ನು ಹೆಚ್ಚು ಪ್ರವೇಶಿಸಬಹುದಾದ, ಪ್ರಾಯೋಗಿಕ, ಕೌಶಲ್ಯ ಆಧಾರಿತ ಮತ್ತು ಉದ್ಯೋಗಾವಕಾಶಗಳೊಂದಿಗೆ ತಡೆ ರಹಿತವಾಗಿ ಸಂಯೋಜಿಸುವತ್ತ ಗಮನ ಹರಿಸಿ, ವಿದ್ಯಾರ್ಥಿಗಳು ಕ್ರಿಯಾತ್ಮಕ ಜಾಗತಿಕ ಆರ್ಥಿಕತೆಗೆ ಸಜ್ಜುಗೊಳ್ಳುವುದನ್ನು ಖಚಿತಪಡಿಸಿಕೊಳ್ಳಲಾಗುತ್ತದೆ. ೨೦೩೦ರ ವೇಳೆಗೆ ಶೇ.೧೦೦ರಷ್ಟು ಜಿ.ಇ.ಆರ್ ಸಾಧಿಸಲು ಮಾಧ್ಯಮಿಕ ಶಿಕ್ಷಣವನ್ನು ಮರುರೂಪಿಸುವುದು, ಭಾರತೀಯ ಭಾಷೆ, ತರಗತಿಗಳಲ್ಲಿ ತಂತ್ರಜ್ಞಾನವನ್ನು ಬಳಸಿಕೊಳ್ಳುವುದು, ಭಾರತೀಯ ಜ್ಞಾನ ವ್ಯವಸ್ಥೆಗಳನ್ನು ಮುಖ್ಯವಾಹಿನಿಗೆ ತರುವುದು ಮತ್ತು ಕಲಿಕೆಯನ್ನು ಎಲ್ಲರಿಗೂ ಲಭ್ಯವಾಗುವಂತೆ ಮಾಡಲು ಒಳಗೊಳ್ಳುವಿಕೆಯನ್ನು ಬೆಳೆಸುವ ಬಗ್ಗೆ ಚರ್ಚೆಯ ಮೇಲೆ ವಿಶೇಷ ಗಮನ ಹರಿಸಲಾಗುವುದು

><><><><><><><><

ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಯೋಜನೆಯಡಿ ದೇಶಾದ್ಯಂತ ಸುಮಾರು ೧೧ ಕೋಟಿ ಮಕ್ಕಳಿಗೆ ಕೇಂದ್ರ ಸರ್ಕಾರ ಬಿಸಿ ಮತ್ತು ಪೌಷ್ಠಿಕ ಆಹಾರ ನೀಡುತ್ತಿದೆ ಎಂದು ಕೇಂದ್ರ ಶಿಕ್ಷಣ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಈ ಯೋಜನೆಯು ಕೇಂದ್ರ ಪ್ರಾಯೋಜಿತ ಯೋಜನೆಗಳಲ್ಲಿ ಒಂದಾಗಿದೆ. ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಒಂದರಿಂದ ಎಂಟನೇ ತರಗತಿಗಳಲ್ಲಿ ಓದುತ್ತಿರುವ ಎಲ್ಲಾ ಶಾಲಾ ಮಕ್ಕಳಿಗೆ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಹಭಾಗಿತ್ವದಲ್ಲಿ ಈ ಯೋಜನೆ ಜಾರಿಗೆ ತರಲಾಗಿದೆ ಎಂದು ವಿವರಿಸಿದರು. ಈ ಯೋಜನೆಯು, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿನ ೧೦ ಲಕ್ಷ ೩೫ ಸಾವಿರಕ್ಕೂ ಹೆಚ್ಚು ಶಾಲೆಗಳ ಸುಮಾರು ೧೧ ಕೋಟಿ ಮಕ್ಕಳನ್ನು ಒಳಗೊಳ್ಳುತ್ತದೆ ಎಂದರು. ಈ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು, ಆಹಾರ ಧಾನ್ಯಗಳ ವೆಚ್ಚ, ಸಾರಿಗೆ ವೆಚ್ಚ, ನಿರ್ವಹಣಾ ಮೇಲ್ವಿಚಾರಣೆ ಮತ್ತು ವಿಕಾಸದ ವೆಚ್ಚಕ್ಕೆ ಶೇಕಡ ನೂರರಷ್ಟು ನೆರವನ್ನು ಒದಗಿಸುತ್ತದೆ. ೨೦೨೪-೨೫ರ ಅವಧಿಯಲ್ಲಿ ಕೇಂದ್ರ ಸರ್ಕಾರವು, ಭಾರತೀಯ ಆಹಾರ ನಿಗಮದ ಮೂಲಕ ಸುಮಾರು ೯ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ೨೬ ಲಕ್ಷ ಮೆಟ್ರಿಕ್ ಟನ್‌ಗಳಷ್ಟು ಆಹಾರ ಧಾನ್ಯಗಳನ್ನು ಪೂರೈಸಿದೆ ಎಂದು ಸಚಿವ ಜಯಂತ್ ಚೌಧರಿ ತಿಳಿಸಿದರು.

><><><><><><><><><><

ವಿಶೇಷ ತೀವ್ರ ಪರಿಷ್ಕರಣೆಗಾಗಿ ಅಧಿಸೂಚನೆ ಹೊರಡಿಸಿದ ವೇಳಾಪಟ್ಟಿಯ ಪ್ರಕಾರ ಆಗಸ್ಟ್ ೧ರಂದು ಬಿಹಾರದ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸದಂತೆ ಚುನಾವಣಾ ಆಯೋಗವನ್ನು ತಡೆಯಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ನ್ಯಾಯಮೂರ್ತಿ ಕಾಂತ್ ಅವರು ಮುಖ್ಯ ನ್ಯಾಯಮೂರ್ತಿಯೊಂದಿಗೆ ಆಡಳಿತಾತ್ಮಕ ಸಭೆಯಲ್ಲಿ ಭಾಗವಹಿಸಬೇಕಿದ್ದ ಕಾರಣ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಜಾಯ್ಮಲ್ಯ ಬಾಗ್ಚಿ ಅವರಿದ್ದ ನ್ಯಾಯಪೀಠವು ಕಾರಣಾಂತರಗಳಿಂದ ವಿವರವಾದ ವಿಚಾರಣೆ ನಡೆಸಲು ಸಾಧ್ಯವಾಗಲಿಲ್ಲ. ಆದಾಗ್ಯೂ, ಈ ವಿಷಯವನ್ನು ಆದಷ್ಟು ಬೇಗ ಆಲಿಸಲಾಗುವುದು ಎಂದು ಅವರು ಅರ್ಜಿದಾರರಿಗೆ ಭರವಸೆ ನೀಡಿದರು.

><><><><><><><><><><

ಜಮ್ಮು ಮತ್ತು ಕಾಶ್ಮೀರದ ಶ್ರೀನಗರ ಜಿಲ್ಲೆಯ ಹರ್ವಾನ್ ಪ್ರದೇಶದ ಲಿಡ್ವಾಸ್ ಮುಲ್ನಾರ್ ಅರಣ್ಯದ ಪ್ರದೇಶದಲ್ಲಿ  ನಡೆದ ಭೀಕರ ಎನ್ ಕೌಂಟರ್ ನಲ್ಲಿ ಮೂವರು ಅಪರಿಚಿತ ಭಯೋತ್ಪಾದಕರು ಹತ್ಯೆಯಾಗಿದ್ದಾರೆ. ಹತ್ಯೆಗೀಡಾದ ಭಯೋತ್ಪಾದಕರ ಗುರುತನ್ನು ಪತ್ತೆ ಹಚ್ಚಲಾಗುತ್ತಿದೆ ಎಂದು ಕಾಶ್ಮೀರದ ಐಜಿಪಿ ವಿ ಕೆ ಬರ್ಡಿ ಮಾಧ್ಯಮಗಳಿಗೆ ತಿಳಿಸಿದ್ದಾರೆ.

><><><><><><><><

ಚೆಸ್ ಆಟಗಾರ್ತಿ ದಿವ್ಯಾ ದೇಶಮುಖ್ ಅವರ ಸಾಧನೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ದಿವ್ಯಾ ದೇಶಮುಖ್ ೨೦೨೫ರ ಫಿಡೆ ಮಹಿಳಾ ವಿಶ್ವಕಪ್ ಗೆದ್ದಿರುವುದು ಮಾತ್ರವಲ್ಲ, ಗ್ರ್ಯಾಂಡ್ ಮಾಸ್ಟರ್ ಆಗಿ ಹೊರಹೊಮ್ಮಿದ್ದಾರೆ. ಈ ಸಂಬಂಧ ಸಾಮಾಜಿಕ ತಾಣದಲ್ಲಿ ಪ್ರತಿಕ್ರಿಯಿಸಿರುವ ಪ್ರಧಾನಿ, ದಿವ್ಯಾ ಸಾಧನೆಯು ಅನೇಕ ಜನರನ್ನು ಪ್ರೇರೇಪಿಸುತ್ತದೆ ಮತ್ತು ಯುವಕರಲ್ಲಿ ಚೆಸ್ ಇನ್ನಷ್ಟು ಜನಪ್ರಿಯವಾಗಲು ಕೊಡುಗೆ ನೀಡುತ್ತದೆ. ಇಂತಹ ಸಾಧನೆ ಮಾಡಿದ ದಿವ್ಯಾ ಅವರಿಗೆ ಅಭಿನಂದನೆಗಳು ಎಂದು ಪ್ರಧಾನಿ ಹೇಳಿದ್ದಾರೆ.

><><><><><><><><

ಚೀನಾದ ಮಕಾವ್ ನಲ್ಲಿ ಇಂದಿನಿಂದ ಮಕಾವ್ ಓಪನ್ ಸೂಪರ್ ಬ್ಯಾಡ್ಮಿಂಟನ್ ಟೂರ್ನಿ ಆರಂಭವಾಗಲಿದೆ. ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ, ಪುರುಷರ ಡಬಲ್ಸ್ ವಿಭಾಗದಲ್ಲಿ ಋತುವಿನ ಮೊದಲ ಪ್ರಶಸ್ತಿಗಾಗಿ ಎದುರು ನೋಡುತ್ತಿದ್ದಾರೆ. ಪುರುಷರ ಸಿಂಗಲ್ಸ್ ನಲ್ಲಿ ಲಕ್ಷ್ಯ ಸೇನ್, ಎಚ್. ಎಸ್. ಪ್ರಣಯ್ ಮತ್ತು ಮಹಿಳಾ ಸಿಂಗಲ್ಸ್ ನಲ್ಲಿ ಉನ್ನತಿ ಹೂಡಾ ಆಕರ್ಷಣೆಯ ಕೇಂದ್ರ ಬಿಂದುವಾಗಿದ್ದಾರೆ.

><><><><><><><><

ದೇಶದ ಹಲವು ಭಾಗಗಳಲ್ಲಿ ಮಳೆಯ ಅಬ್ಬರ ಮುಂದುವರಿದಿದೆ. ಪೂರ್ವ ರಾಜಸ್ಥಾನ, ಬಿಹಾರ, ಹಿಮಾಚಲ ಪ್ರದೇಶ, ಮಧ್ಯಪ್ರದೇಶ ಮತ್ತು ಪಶ್ಚಿಮ ಉತ್ತರ ಪ್ರದೇಶದ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರಿ ಮಳೆಯಾಗಲಿದೆ ಎಂದು ಭಾರತ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

><><><><><><><><